ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು
**PAPER CLIPPINGS**

17

ಇಲಾಖೆ / ವಿಷಯ : DEPARTMENT / SUBJECT: ವಿಧಾನ ಸಭೆ ಅಧಿವೇಶನ

ಪತ್ರಿಕೆಯ ಹೆಸರು : NAME OF THE NEWS PAPER: ವಿಶ್ವವಾಣಿ

ದಿನಾಂಕ : DATE :19/11/20

### ಡಿ.7ರಿಂದ 15ವರೆಗೆ ಚಳಿಗಾಲ ಅಧಿವೇಶನ

# ಅಧಿವೇಶನ: ಈ ವರ್ಷವೂ ಸುವರ್ಣಸೌಧ ವಂಚಿತ

19/11/20

ವಿಶ್ವವಾಣಿ ಸುದ್ದಿಮನೆ ಬೆಂಗಳೂರು

ರಾಜ್ಯದಲ್ಲಿ ಕರೋನಾ ಸೋಂಕಿತರ ಸಂಖ್ಯೆ ಕ್ಷೀಣಿಸಿದ್ದರೂ, ಆತಂಕ ದೂರಾಗಿಲ್ಲ, ಆದ್ದರಿಂದ ಈ ಬಾರಿಯ ಚಳಿಗಾಲದ ಅಧಿವೇಶನವನ್ನು ಬೆಳಗಾವಿ ಬದಲು ಬೆಂಗಳೂರಿನಲ್ಲಿಯೇ ನಡೆಸಲು ನಿರ್ಧರಿಸಲಾಗಿದೆ.

ಬುಧವಾರ ನಡೆದ ಸಚಿವ ಸಂಪುಟ ಸಭೆಯಲ್ಲಿ ಈ ಮಹತ್ವದ ತೀರ್ಮಾನ ಕೈಗೊಂಡಿರುವ ರಾಜ್ಯ ಸರಕಾರ, ಆರ್ಥಿಕ ಹಾಗೂ ಆರೋಗ್ಯವನ್ನು ಗಮನದಲ್ಲಿರಿಸಿಕೊಂಡು ಬೆಳಗಾವಿ ಬದಲಿಗೆ ಬೆಂಗಳೂರಿನಲ್ಲಿಯೇ ಅಧಿವೇಶನ ನಡೆಸುವುದಕ್ಕೆ ತೀರ್ಮಾನಿಸಲಾಗಿದೆ. ಕಳೆದ ವರ್ಷ ಉತ್ತರ ಕರ್ನಾಟಕ ಭಾಗದಲ್ಲಿ ಭಾರಿ ಪ್ರವಾಹದಿಂದ ಅಧಿವೇಶನವನ್ನು ಮೊಟಕುಗೊಳಿಸಲಾಗಿತ್ತು. ಈ ಬಾರಿ ಕರೋನಾ ಆತಂಕದಿಂದ ಬೆಳಗಾವಿ ಅಧಿವೇಶನವನ್ನು ರದ್ದುಗೊಳಿಸಲಾಗಿದೆ.

ಸಚಿವ ಸಂಪುಟ ಸಭೆ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಕಾನೂನು ಮತ್ತು ಸಂಸದೀಯ ವ್ಯವಹಾರ ಖಾತೆ ಸಚಿವ ಮಾಧುಸ್ವಾಮಿ, 'ಡಿ.7ರಿಂದ 15ರವರೆಗೆ ವಿಧಾನ ಮಂಡಲದ ಚಳಿಗಾಲದ ಅಧಿವೇಶನ ಬೆಂಗಳೂರಲ್ಲಿ ನಡೆಸಲು ತೀರ್ಮಾನಿಸಲಾಗಿದೆ. ಆರಂಭದಲ್ಲಿ ಬೆಳಗಾವಿಯಲ್ಲಿ ನಡೆಸುವ ಚಿಂತನೆಯಿತ್ತು. ಆದರೆ ಆರ್ಥಿಕ ಹಾಗೂ ಇತರ ಸಮಸ್ಯೆಗಳ ಹಿನ್ನೆಲೆಯಲ್ಲಿ ಬೆಂಗಳೂರಿನಲ್ಲಿ 'ಅಧಿವೇಶನ ನಡೆಸಲು ತೀರ್ಮಾನಿಸಲಾಗಿದೆ' ಎಂದು ಸ್ಪಷ್ಟಪಡಿಸಿದರು.

- ಪ್ರಾಧಿಕಾರ ರಚಿಸಲು ಕಾನೂನು ತರಲು ಚಿಂತನೆ
- ಪ್ರವಾಹ ಪೀಡಿತ ಜಿಲ್ಲೆಗಳಿಗೆ ಸಾವಿರ ಕೋಟಿ ರು. ಬಿಡುಗಡೆ
- ಪರಿಶಿಷ್ಟ ಪಂಗಡ ಮೀಸಲು ಹೆಚ್ಚಿಸಲು ಉಪಸಮಿತಿ ರಚನೆ
- ಎಸ್‌ಟಿ ಮೀಸಲು ಹೆಚ್ಚಳಕ್ಕೆ ಸಂಬಂಧಿಸಿದಂತೆ ಸಚಿವ ಸಂಪುಟ ಉಪಸಮಿತಿ ರಚನೆ

## ಮರಾಠ ಪ್ರಾಧಿಕಾರವಲ್ಲ, ನಿಗಮ: ಮಾಧುಸ್ವಾಮಿ

ಮರಾಠ ಪ್ರಾಧಿಕಾರ ಸ್ಥಾಪನೆಗೆ ಭಾರಿ ವಿರೋಧ ವ್ಯಕ್ತವಾಗಿರುವುದರಿಂದ ಮರಾಠ ಅಭಿವೃದ್ಧಿ ಪ್ರಾಧಿಕಾರದ ಬದಲಿಗೆ, ಮರಾಠ ಸಮುದಾಯ ಅಭಿವೃದ್ಧಿ ನಿಗಮವೆಂದು ಬದಲಾಯಿಸಲು ನಿರ್ಧರಿಸಲಾಗಿದೆ. ಈ ಕುರಿತು ಸಚಿವ ಮಾಧುಸ್ವಾಮಿ ಸ್ಪಷ್ಟನೆ ನೀಡಿದ್ದು, 'ಮರಾಠ ಅಭಿವೃದ್ಧಿ ಪ್ರಾಧಿಕಾರದ ಹೆಸರು ಬದಲಾವಣೆಗೆ ನಿರ್ಧರಿಸಿದ್ದು, ಇನ್ಮುಂದೆ "ಮರಾಠ ಸಮುದಾಯ ನಿಗಮ" ಎಂದು ಬದಲಾವಣೆಯಾಗಲಿದೆ ಎಂದರು